**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಶಶಿ ಟಿ.ಕೆ | ಪ್ರಾಸಾ-13 |
| ತಂದೆಯ ಹೆಸರು | : ಕುಟ್ಟಪ್ಪ | ಚಾಸಾ-20 |
| ವಯಸ್ಸು | : 53 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ | ದಿನಾಂಕಃ 24.10.2025. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಭ್ಯಾಸ.ಸ.ಅ. ರವರಿಂದ:**

ನಾನು 2019 ರಿಂದ 2024 ರವರೆಗೆ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.02.11.20232 ರಂದು ಮ.12.00 ರ ಸಮಯಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿಕೊಂಡು, ಠಾಣಾ.ಮೊ.ನಂ.109/2023 ರ ಕಲಂ 341, 504, 323, 324 ಮತ್ತು 353 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ನ್ಯಾಯಲಾಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ನಿವೇದನೆ ಮಾಡಿಕೊಂಡಿರುತ್ತೇನೆ. ನಂತರ ಚಾಸಾ-1 ರವರನ್ನು ಚಾಸಾ-4 ರವರೊಟ್ಟಿಗೆ ಆಸ್ಪತ್ರೆಗೆ ವೈದ್ಯಕೀಯ ತಪಾಸಣಣೆಗೆಂದು ಕಳುಹಿಸಿಕೊಟ್ಟಿರುತ್ತೇನೆ. ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಪ್ರಕರಣದ ಮುಂದಿನ ತನಿಖೆಯ ಸಂಬಂದ ಚಾಸಾ-25 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1(ಬಿ) ಮತ್ತು ನಿಪಿ-2(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಕೆ.ಬಿ. ವಕೀಲರಿಂದ ಆರೋಪಿ ಪರ ವಕೀಲರಾದ ಶ್ರೀ**

**ಹೆಚ್.ಎಸ್.ಆರ್ ವಕೀಲರ ಪರವಾಗಿಃ**

ಆ ದಿನ ದೂರನ್ನು ದಾಖಲಿಸಲು ಚಾಸಾ-1 ರವರು ಒಬ್ಬರೇ ಬಂದಿರುತ್ತಾರೆ. ದೂರನ್ನು ಚಾಸಾ-1 ರವರು ಬರವಣಿಗೆ ಮಾಡಿಕೊಂಡು ಬಂದಿದ್ದರು. ಆರೋಪಿಗೂ, ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಅವರ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.